ತರಗತಿ : 9 ನೇ ತರಗತಿ

ಪಾಠದ ಹೆಸರು : ಬೆಡಗಿನ ತಾಣ ಜಯಪುರ

ಕೃತಿಕಾರರ ಹೆಸರು : ಶಿವರಾಮ ಕಾರಂತ

## ಕೃತಿಕಾರರ ಪರಿಚಯ :



ಶಿವರಾಮ ಕಾರಂತ

ಶಿವರಾಮ ಕಾರಂತರು ( ಕ್ರಿಸ್ತ ಶಕ ೧೯೦೨ ) ಉಡುಪಿ ಜಿಲ್ಲೆಯ ಕೋಟದವರು , ಇವರ ಪ್ರಮುಖ ಕೃತಿಗಳು : ಕಾದಂಬರಿಗಳು : ಚೋಮನದುಡಿ , ಮರಳಿಮಣ್ಣಿಗೆ , ಬೆಟ್ಟದಜೀವ , ಅಳಿದಮೇಲೆ ಮುಂತಾದವು . ಕಥಾಸಂಕಲನಗಳು : ಹಸಿವು , ಹಾವು , ಕವಿ , ಕರ್ಮ , ಕವನ ಸಂಕಲನಗಳು : ರಾಷ್ಟ್ರಗೀತ ಸುಧಾಕರ ಮತ್ತು ಸೀಳ್ಕವನಗಳು , ಪ್ರವಾಸ ಕಥನಗಳು : ಅಬುವಿನಿಂದ ಬರಾಮಕ್ಕೆ , ಅಪೂರ್ವ ಪಶ್ಚಿಮ , ಅರಸಿಕರಲ್ಲ , ಪಾತಾಳಕ್ಕೆ ಪಯಣ , ಈ ಕೃತಿಗಳಲ್ಲದೆ ಹುಚ್ಚು ಮನಸ್ಸಿನ ಹತ್ತು ಮುಖಗಳು ಎಂಬ ಆತ್ಮಕಥನ , ಯಕ್ಷಗಾನ ಬಯಲಾಟ - ಜಾನಪದ ಸಾಹಿತ್ಯ ಮುಂತಾದ ಕೃತಿಗಳನ್ನು ರಚಿಸಿದ್ದಾರೆ . ಇವರಿಗೆ ಲಕಭಿಸಿರುವ ಪ್ರಶಸ್ತಿ ಪುರಸ್ಕಾರಗಳು : . ಮೂಕಜ್ಜಿಯ ಕನಸುಗಳು ಕಾದಂಬರಿಗೆ ಜ್ಞಾನಪೀಠ ಪ್ರಶಸ್ತಿ , * ಯಕ್ಷಗಾನ ಬಯಲಾಟ ಕೃತಿಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ . ಮೈಮನಗಳ ಸುಳಿಯಲ್ಲಿ ಕೃತಿಗೆ ಪಂಪ ಪ್ರಶಸ್ತಿ ಲಭಿಸಿದೆ . * ಇವರು ೧೯೫೫ ರಲ್ಲಿ ಮೈಸೂರಿನಲ್ಲಿ ನಡೆದ ೩೭ ನೆಯ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿದ್ದರು . [ ಪ್ರಸ್ತುತ ಗದ್ಯವನ್ನು ಅಬುವಿನಿಂದ ಬರಾಮಕ್ಕೆ ಕೃತಿಯಿಂದ ಆರಿಸಿಕೊಳ್ಳಲಾಗಿದೆ . ]

## ಅ ] ಕೊಟ್ಟಿರುವ ಪ್ರಶ್ನೆಗಳಿಗೆ ಒಂದು ವಾಕ್ಯಗಳಲ್ಲಿ ಉತ್ತರಿಸಿ ,

**1. ಜಯಪುರದ ಜನರಿಗೆ ಯಾವ ಯಾವ ಬಣ್ಣಗಳು ಇಷ್ಟ ?**

ಉತ್ತರ : ಜಯಪುರದ ಜನರಿಗೆ ಕೆಂಪು , ಕಿತ್ತಳೆ , ಹಳದಿ ಬಣ್ಣಗಳು ಇಷ್ಟ .

**2. ಜಯಪುರದ ಪೂರ್ವದ ರಾಜಧಾನಿ ಯಾವುದು ?**

ಉತ್ತರ : ಜಯಪುರದ ಪೂರ್ವದ ರಾಜಧಾನಿ ಅಂಬೇರ ವಿಗೆ

**3. ಲೇಖಕರಿಗಿದ್ದ ಹಂಬಲವೇನು ?**

ಉತ್ತರ : ಜಯಪುರದಲ್ಲಿ ಜಾನಪದ ನೃತ್ಯಗಳನ್ನು ನೋಡಬೇಕೆಂಬುದು ಲೇಖಕರ ಹಂಬಲವಾಗಿತ್ತು ,


| | |
|---|---|
| Download: Kannadapdf.com | https://kannadapdf.com/ |

**4.** ರೈಗಳ ಮನೆ ಎಂಥ ಪ್ರದೇಶದಲ್ಲಿತ್ತು **?**

ಉತ್ತರ : ಹೊರಗಡೆ ನಾಲ್ಕು ಸುತ್ತಲೂ ಉಸುಬು ಹರಡಿದ್ದ ಮರುಭೂಮಿಯಲ್ಲಿ ರೈಗಳ ಮನೆಯಿತ್ತು .

**5.** ಲೇಖಕರಿಗೆ ಜಯಪುರದ ಮನೆಗಳ ಮೇಲೆ ಮೋಹವೇಕೆ **?**

ಉತ್ತರ : ಜಯಪುರದಲ್ಲಿನ ಒಂದೊಂದು ಮನೆಯೂ ಒಂದೊಂದು ಶೈಲಿಯದೂ ಒಂದೊಂದು ದೇಶದ್ದೂ ಆಗಿ ಕಾಣಿಸುವುದಿಲ್ಲ . ಆದುದರಿಂದಲೇ ಲೇಖಕರಿಗೆ ಅವುಗಳ ಮೇಲೆ ಮೋಹ

## ಆ ] ಕೊಟ್ಟಿರುವ ಪ್ರಶ್ನೆಗಳಿಗೆ ಮೂರು - ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ.

**1 ,** ಮೀರಾಬಾಯಿ ದೇವಾಲಯದ ಸೌಂದರ್ಯವನ್ನು ವಿವರಿಸಿ **,**

ಉತ್ತರ : ಅಂಬೇರ ಕೋಟೆಯ ಆವರಣದ ಹಿಂದುಗಡೆ ಇರುವ ತಗ್ಗಿನ ಕಣಿವೆಯ ತಳದಲ್ಲಿ ಮೀರಾಬಾಯಿಯ ದೇವಾಲಯವಿದೆ . ಆಕೆ ಗಿರಿಧರನಾಗರನನ್ನು ಪೂಜಿಸಿದ ಸ್ಥಳವದು . ಕೆಳಗಿಳಿದು ಹೋಗಿ ಗುಡಿಯನ್ನು ನೋಡಿದರೆ ಅದರ ಸೊಬಗು ಚೆನ್ನಾಗಿ ಕಾಣುತ್ತದೆ . ಅಲ್ಲಿ ನಕ್ಷತ್ರಾಕೃತಿಯನ್ನು ತುಂಬಿಕೊಂಡ ಗರ್ಭಗೃಹ , ನವರಂಗಗಳಿವೆ .

**2.** ಲೇಖಕರು ನೋಡಿದ ಜನಪದ ನೃತ್ಯದ ಸೊಬಗನ್ನು ಚಿತ್ರಿಸಿ **,**

ಉತ್ತರ : ಅದು ಊರಿನ ಜನಸಾಮಾನ್ಯರ ನೃತ್ಯವಾಗಿತ್ತು . ಇಬ್ಬರು ಯೌವನಸ್ಥರು ಸ್ತ್ರೀಯರ ಉಡುಗೆ ಉಟ್ಟಿದ್ದರು . ಮಾರವಾಡಿ ಸ್ತ್ರೀಯರಂತೆ ತಲೆಗೆ ಸೆರಗು ಹಾಕಿಕೊಂಡು , ಮುಖತೋರಿಸದೆ ಕುಣಿಯತೊಡಗಿದರು . ಹಿಮ್ಮೇಳಕ್ಕೆ ಡೋಲು ತಮಟೆಗಳಿದ್ದವು . ಮುಂಭಾಗದಲ್ಲಿ ಸ್ತ್ರೀವೇಷದ ನರ್ತಕರು ನರ್ತಿಸತೊಡಗಿದರು . ಅವರ ಕಾಲಿನ ನಡಿಗೆಯಲ್ಲೂ ಕೈಗಳ ಚಲನೆಯಲ್ಲೂ ಜಾ ಚೆಲುವುಗಳೆರಡೂ ಇದ್ದವು .

**3.** ಜಯಪುರದ ಬೀದಿ ಹಾಗೂ ಮನೆಗಳ ಸೌಂದರ್ಯವನ್ನು ವರ್ಣಿಸಿ **,**

ಉತ್ತರ : ಜಯಪುರ ನಗರದ ಬೀದಿಗಳು ಬಹಳ ಅಗಲವಾಗಿಯೂ ನೇರವಾಗಿಯೂ ಇವೆ . ಬಹುದೂರದಿಂದ ಕಾಣಿಸುವ ಅಂಗಡಿ ಮನೆಗಳ ದೇಶೀ ವಾಸ್ತುರಚನೆ ಚೆನ್ನಾಗಿ ಶೋಭಿಸುತ್ತದೆ . ಅಲ್ಲಿನ ಒಂದೊಂದು ಮನೆಯೂ ಒಂದೊಂದು ಶೈಲಿಯದೂ ಒಂದೊಂದು ದೇಶದ್ದೂ ಆಗಿ ಕಾಣಿಸುವುದಿಲ್ಲ . ಅಲ್ಲಿನ ಮುಖ್ಯ ಬೀದಿಗಳು ಸಂಧಿಸುವಲ್ಲಿ ಸುಂದರವಾದ ಚೌಕಗಳಿವೆ . ಕೆಲವೊಂದು ಕಡೆಗಳಲ್ಲಿ ಭವ್ಯವಾದ ಮಹಾದ್ವಾರಗಳಿವೆ .

**4.** ಲೇಖಕರ ಮೊದಲ ಅಂಬೇರ ಭೇಟಿಗೂ ಇತ್ತೀಚಿನ ಭೇಟಿಗೂ ಯಾವ ವ್ಯತ್ಯಾಸವಿತ್ತು **?**

ಉತ್ತರ : ಲೇಖಕರು ಹಿಂದೆ ಅಂಬೇರಕ್ಕೆ ಹೋಗಿದ್ದಾಗ ಅಲ್ಲಿ ಜನವಸತಿ ಇದ್ದಿರಲಿಲ್ಲ . ಆಗ ಅಲ್ಲಿನ ಹಲವಾರು ಪ್ರಾಚೀನ ಗುಡಿಗೋಪುರಗಳು ಗೂಬೆಯ ಮನೆಗಳಾಗಿದ್ದವು . ಆದರೆ ಈಗ ಹಾಗಿಲ್ಲ : ನೂರಾರು ಸಿಂಧಿ ಕುಟುಂಬಗಳು ಅಲ್ಲಿ ಮನೆ ಮಾಡಿಕೊಂಡಿವೆ .

## ಇ ] ಕೊಟ್ಟಿರುವ ಪ್ರಶ್ನೆಗಳಿಗೆ ಐದು - ಆರು ವಾಕ್ಯಗಳಲ್ಲಿ ಉತ್ತರಿಸಿ .

**1.** ಅಂಬೇರ ಬೆಟ್ಟದ ಮೂರು ಅಂತಸ್ತಿನ ಅರಮನೆಯ ಒಳಾಂಗಣ ಚೆಲುವನ್ನು ತಿಳಿಸಿ **.**

ಉತ್ತರ : ಅರಮನೆಯ ಮೊದಲ ಅಂತಸ್ತಿನಲ್ಲಿ ಚಿತ್ರ ಕೆಲಸಗಳಿಂದ ಕೂಡಿದ ಹಾಲುಗಲ್ಲಿನ ರಚನೆಯಿಂದ ಕೂಡಿದ ಪುಟ್ಟ ದೇವಾಲಯವಿದೆ . ಅದರ ಗೋಡೆ , ನೆಲ , ಸ್ತಂಭಗಳೂ ಹಾಲುಗಲ್ಲಿನವು . ಮೇಲಿನ ಅಂಗಳವನ್ನೇರಿ ಹೋದರೆ ಅಲ್ಲಿ ದೊಡ್ಡದಾದ , ವಿಶಾಲವಾದ ಹಾಲುಗಲ್ಲಿನ ಸಭಾಂಗಣ ಕಂಡುಬರುತ್ತದೆ . ಅದರ ಚಾವಣಿ , ರಜಪುತಾನದ ಶೈಲಿಯ ಕಮಾನು ಮತ್ತು ಕಂಬಗಳು ತುಂಬ ಲಲಿತವಾಗಿದ್ದು , ಪರಸ್ಪರ ಹೊಂದಿಕೊಂಡು ಸುಂದರವಾಗಿ ಕಾಣುತ್ತದೆ . ಎದುರಿನ ಅಂಗಣವೂ ಸಾಕಷ್ಟು ವಿಶಾಲವಾಗಿದೆ . ಅಲ್ಲಿಂದ ಮೂರನೆಯ ಅಂತಸ್ತಿಗೆ ಹೋದರೆ ರಾಜರ ಅಂತಃಪುರವಿದ್ದು ಅಲ್ಲಿನ ಕೆಲವು ಭಾಗಗಳಲ್ಲಿ ಚಂದ್ರಕಾಂತ ಶಿಲೆಯ ಸುಂದರ ಮಂಟಪಗಳಿವೆ . ಶಿಲೆಯನ್ನು ಕೆತ್ತಿ ಬಣ್ಣದ ಕಲ್ಲುಗಳಿಂದ ಕೊರೆದು ತುಂಬಿಸಿದ ಲತಾಪುಷ್ಪಗಳ ಚಿತ್ರಾವಳಿಗಳೂ ಇವೆ . ಇನ್ನೊಂದೆರಡು ಚಾವಡಿಗಳು ಕನ್ನಡಿಯ ಚೂರುಗಳನ್ನು ಸುಣ್ಣದ ಗಾರೆಯಲ್ಲಿ ಅಂಟಿಸಿ , ಚಿತ್ರವಿಚಿತ್ರ ಪ್ರತಿರೂಪಗಳನ್ನು ನಿರ್ಮಿಸಿ ಅಲಂಕರಿಸಲ್ಪಟ್ಟಿವೆ . ಕತ್ತಲಿನಲ್ಲಿ ದೀವಿಗೆ ಹೊತ್ತಿಸಿದಾಗ ಆ ಲಕೋಪಲಕ್ಷ ಗಾಜಿನ ತುಣುಕುಗಳು ಚಾವಡಿಗೆ ನಕ್ಷತ್ರಲೋಕದ ಸೊಬಗನ್ನು ಕೊಡುತ್ತವೆ .

### 2. ಜಯಪುರದ ಜನರಿಗೆ ಬಣ್ಣಗಳ ಬಗೆಗೆ ಇರುವ ಮೋಹವನ್ನು ತಿಳಿಸಿ ,

ಉತ್ತರ : ಜಯಪುರ ಬಣ್ಣಗಾರರ ತವರೂರು , ಬಣ್ಣ ಹಾಕುವ ಕುಶಲಿಗರು ಆ ಊರಿನಲ್ಲಿ ಬಹಳ ಮಂದಿ ಇದ್ದಾರೆ . ಬಣ್ಣದ ಮೋಹವಿರುವ ಜನರೂ ಬಹಳ ಇದ್ದಾರೆ . ಗಿಡಮರಗಳಿಲ್ಲದ ಸ್ಥಳದಲ್ಲಿ ವಾಸಿಸುವ ಜನರಿಗೆ , ಕಣ್ಣಿನ ತಣಿವು ಹೇಗೆ ಬರಬೇಕು ? ಹಾಗೆಂದೇ ಇಲ್ಲಿನ ಜನರು ಅದರಲ್ಲೂ ಹೆಂಗಸರೂ ರಂಗುರಂಗಿನ ಲಂಗ , ಪಾಯಿಜಾಮಾ , ಸೀರೆ , ರವಿಕೆ , ಮೇಲುದೆ ತೊಡುವ ಅಭ್ಯಾಸದವರು . ಅವರಿಗೆ ಕೆಂಪು , ಕಿತ್ತಳೆ , ಹಳದಿ ಎಂದರೆ ಪ್ರಾಣ . ನಿತ್ಯವೂ ಹೋಳಿ ಹುಣ್ಣಿಮೆ ಮಾಡುವವರಂತೆ ಬಣ್ಣದ ಚೆಲ್ಲಾಟ ಅವರ ಬಟ್ಟೆಗಳಲ್ಲಿ , ಗಂಡಸರೂ ರಂಗುರಾಯರೇ . ಅವರ ಪಂಚೆ , ಅಂಗಿಗಳಲ್ಲಿ ರಂಗು ಕಾಣಿಸದಿದ್ದರೂ ಮುಂಡಾಸಿನ ಮೂವತ್ತು ಮೊಳಗಳಲ್ಲಿ ಮುನ್ನೂರು ಬಣ್ಣಗಳನ್ನು ಮೆರೆಯಿಸುವುದುಂಟು . ಸುತ್ತುಸುತ್ತಿನ ಅವರ ದೇಶೀ ಮುಂಡಾಸನ್ನು ಚೆನ್ನಾಗಿ ಬಿಗಿದುಕೊಂಡಾಗ ಬಲು ಗಂಭೀರವಾಗಿಯೇ ಕಾಣಿಸುತ್ತದೆ .

### 3. ಜಂತ್ರ ಮಂತ್ರದ ವಿಶೇಷತೆಯನ್ನು ಪರಿಚಯ ಮಾಡಿಕೊಡಿ .

ಉತ್ತರ : ' ಜಂತ್ರ ಮಂತ್ರ ' ಹಳೆಯ ಕಾಲದ ಖಗೋಳವಿಜ್ಞಾನದ ಪರಿಶೀಲನಾಲಯ , ೪೦೦-೫೦೦ ವರ್ಷಗಳ ಪೂರ್ವದಲ್ಲಿ ಖಗೋಳಶಾಸ್ತ್ರಜ್ಞರು , ಗ್ರಹ , ಸೂರ್ಯ ಚಂದ್ರ , ತಾರಾಮಂಡಲಗಳನ್ನು ಅಳೆದು ಪರಿಶೀಲಿಸಿ ನೋಡುವ ಸಲುವಾಗಿ , ಅಲ್ಲಿ ವಿಚಿತ್ರವಾದ ಸಾಧನಗಳನ್ನು ನೆಟ್ಟಿದ್ದಾರೆ . ಅಂತಹ ಹತ್ತೆಂಟು ವಿಧದ ಸಾಧನಗಳ ವಿಚಿತ್ರ ರಚನೆಗಳಿವೆ . ಗಳಿಗೆ ಅಳೆಯುವುದಕ್ಕೆ ಪ್ರತಿಯೊಂದು ತಿಂಗಳಿನಲ್ಲೂ ಸೂರ್ಯ , ನಕ್ಷತ್ರಗಳ ಗತಿ ಪರಿಶೀಲಿಸುವುದಕ್ಕೆ ಏನೇನೋ ಏರ್ಪಾಟುಗಳಿವೆ . ಪ್ರತಿಯೊಂದು ಸಾಧನದ ಮೇಲೂ ಅವುಗಳ ಉಪಯೋಗ ಮತ್ತು ಕಾಲವನ್ನು ಅಳೆಯುವ ರೀತಿ ಮೊದಲಾದುವನ್ನು ನಮೂದಿಸಿದೆ . ದೂರದರ್ಶಕ ಯಂತ್ರದ ಸಹಾಯವಿಲ್ಲದೆ , ಬರಿಗಣ್ಣಿನಿಂದಲೇ ಖಗೋಳದ ಗ್ರಹಗಳ ಗತಿಯನ್ನು ಅಳೆಯಲು ಮಾಡಿದ ಈ ಸಾಧನಗಳು ಗಣಿತಕ್ಕೂ ಸೂಕ್ಷ್ಮ ಪರಿಶೀಲನೆಗೂ ಹಿರಿಯರು ಸಲ್ಲಿಸಿದ ಕಾಣಿಕೆ .

## ಈ ] ಸಂದರ್ಭಸಹಿತ ಸ್ವಾರಸ್ಯವನ್ನು ವಿವರಿಸಿ ,

### 1. " ಪ್ರಾಚೀನ ಗುಡಿಗೋಪುರಗಳು ಗೂಬೆಯ ಮನೆಗಳಾಗಿದ್ದವು "

ಉತ್ತರ : ಆಯ್ಕೆ : ಈ ವಾಕ್ಯವನ್ನು ಶಿವರಾಮಕಾರಂತರು ಬರೆದಿರುವ ಅಬುವಿನಿಂದ ಬರಾಮಕ್ಕೆ ' ಕೃತಿಯಿಂದ ಆರಿಸಲಾಗಿರುವ ಬೆಡಗಿನ ತಾಣ ಜಯಪುರ ' ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ . ಸಂದರ್ಭ : ಲೇಖಕರು ಹದಿನೈದು ವರ್ಷಗಳ ಹಿಂದೆ ಜಯಪುರದ ಸಮೀಪದ ಅಂಬೇರಾಕ್ಕೆ ಭೇಟಿ ನೀಡಿದ್ದಾಗ ಅಲ್ಲಿ ಜನವಸತಿ ಇರಲಿಲ್ಲ . ಅಂದಿಗೂ ಇಂದಿಗೂ ಅಲ್ಲಿ ಉಂಟಾಗಿರುವ ಬದಲಾವಣೆಯನ್ನು ವಿವರಿಸುವ ಸಂದರ್ಭದಲ್ಲಿ ಈ ಮಾತನ್ನು ಹೇಳಿದ್ದಾರೆ . ಹಿಂದೆ ಅಲ್ಲಿನ ಹಲವಾರು ಪ್ರಾಚೀನ ಗುಡಿಗೋಪುರಗಳು ಗೂಬೆಯ ಮನೆಗಳಾಗಿದ್ದವು , ಆದರೆ ಈಗ ಹಾಗಿಲ್ಲ : ನೂರಾರು ಸಿಂಧೀ ಕುಟುಂಬಗಳು ಅಲ್ಲಿ ಮನೆ ಮಾಡಿಕೊಂಡಿವೆ ' ಎಂದು ಲೇಖಕರು ಅಭಿಪ್ರಾಯಪಟ್ಟಿದ್ದಾರೆ .



KannadaPdf.com

ಸ್ವಾರಸ್ಯ : ಅಂದು ಜನವಸತಿ ಇಲ್ಲದೆ ಪ್ರಾಚೀನ ಗುಡಿಗೋಪುರಗಳು ಪಾಳುಬಿದ್ದಿದ್ದವು . ಆದರೆ ಆಧುನಿಕತೆಯ ಪ್ರಭಾವದಿಂದ ಈಗ ಅಲ್ಲಿ ಜನಸಂದಣಿ ಇದೆ ಎಂಬುದು ಈ ಮಾತಿನ ಸ್ವಾರಸ್ಯವಾಗಿದೆ .

**2. " ಚಾವಡಿಗೆ ನಕ್ಷತ್ರಲೋಕದ ಸೊಬಗನ್ನು ಕೊಡುತ್ತವೆ "**

ಉತ್ತರ : ಆಯ್ಕೆ : ಈ ವಾಕ್ಯವನ್ನು ಶಿವರಾಮಕಾರಂತರು ಬರೆದಿರುವ ' ಅಬುವಿನಿಂದ ಬರಾಮಕ್ಕೆ ' ಕೃತಿಯಿಂದ ಆರಿಸಲಾಗಿರುವ ಬೆಡಗಿನ ತಾಣ ಜಯಪುರ ' ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ . ಸಂದರ್ಭ : ಅಂಬೇರ ಕೋಟೆಯಲ್ಲಿರುವ ಅರಮನೆಯ ಮೂರನೆಯ ಅಂತಸ್ತಿನಲ್ಲಿ ಕೆಲವು ಚಾವಡಿಗಳಲ್ಲಿ ಕನ್ನಡಿಯ ಚೂರುಗಳನ್ನು ಸುಣ್ಣದ ಗಾರೆಯಲ್ಲಿ ಅಂಟಿಸಿ , ಚಿತ್ರವಿಚಿತ್ರ ಪ್ರತಿರೂಪಗಳನ್ನು ನಿರ್ಮಿಸಿ ಅಲಂಕರಿಸಿದಂತಹ ಕಂಬ , ಮುಚ್ಚಿಕೆಗಳುಳ್ಳ ರಚನೆಯನ್ನು ಕುರಿತು ತಿಳಿಸುವ ಸಂದರ್ಭದಲ್ಲಿ ಲೇಖಕರು ಈ ಮಾತನ್ನು ಹೇಳಿದ್ದಾರೆ . ಅಂತಹ ರಚನೆಗಳಿರುವೆಡೆ ಕತ್ತಲಿನಲ್ಲಿ ದೀವಿಗೆ ಹೊತ್ತಿಸಿದಾಗ , ಲಕ್ಷ್ಮೀಪಲಕ್ಷ ಗಾಜಿನ ತುಣುಕುಗಳು ಚಾವಡಿಗೆ ನಕ್ಷತ್ರಲೋಕದ ಸೊಬಗನ್ನು ಕೊಡುತ್ತವೆ . ಎಂದು ವರ್ಣಿಸಿದ್ದಾರೆ .

ಸ್ವಾರಸ್ಯ : ಜಯಪುರವನ್ನು ಆಳಿದ ರಜಪೂತ ದೊರೆಗಳ ಕಲಾ ರಸಿಕತೆ ಹಾಗು ಅವರು ಕಲೆಗೆ ನೀಡಿದ ನೀಡಿದ ಪ್ರೋತ್ಸಾಹ ಲೇಖಕರ ಈ ಮಾತಿನಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ .

**3. " ಅಲ್ಲಿ ಮಧ್ಯಾಹ್ನ ವೇಳೆ ಸ್ನಾನಕ್ಕೆ ನೀರು ಕಾಯಿಸುವ ಅಗತ್ಯವಿಲ್ಲ . "**

ಉತ್ತರ : ಆಯ್ಕೆ : ಈ ವಾಕ್ಯವನ್ನು ಶಿವರಾಮಕಾರಂತರು ಬರೆದಿರುವ ' ಆಬುವಿನಿಂದ ಬರಾಮಕ್ಕೆ ಕೃತಿಯಿಂದ ಆರಿಸಲಾಗಿರುವ ' ಬೆಡಗಿನ ತಾಣ ಜಯಪುರ ' ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ . ಸಂದರ್ಭ : ಕಾರಂತರು ಜಯಪುರದಲ್ಲಿದ್ದ ತಮ್ಮ ಸ್ನೇಹಿತರಾದ ರೈಯವರ ಮನೆಗೆ ಹೋದಾಗ ಅಲ್ಲಿ ತಾವು ಬಿಸಿನೀರಿನ ಸ್ನಾನ ಮಾಡಿದ ಬಗ್ಗೆ ತಿಳಿಸುವ ಸಂದರ್ಭದಲ್ಲಿ ಹೀಗೆ ಹೇಳಿದ್ದಾರೆ . " ರೈಯವರ ಮನೆ ಸುತ್ತಲೂ ಮರಳು ಹರಡಿದ್ದ ಮರುಭೂಮಿಯಲ್ಲಿತ್ತು . ಅಲ್ಲಿ ಮಧ್ಯಾಹ್ನ ವೇಳೆ ಸ್ನಾನಕ್ಕೆ ನೀರು ಕಾಯಿಸುವ ಅಗತ್ಯವಿಲ್ಲ . ಏಕೆಂದರೆ ಉಸುಬಿನ ಕಾವಿನಿಂದ ನಲ್ಲಿಯ ನೀರು ಕಾದೇ ಬರುತ್ತಿತ್ತು " ಎಂದು ಹೇಳಿದ್ದಾರೆ .

ಸ್ವಾರಸ್ಯ : ಮರುಭೂಮಿಯಲ್ಲಿ ವಾಸಿಸುವವರ ಜೀವನ ಶೈಲಿಯ ಮೇಲೆ ಅಲ್ಲಿನ ವಾಯುಗುಣ ಬೀರುವ ಪ್ರಭಾವ ಇಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ .

**4. " ಗಂಡಸರೂ ರಂಗುರಾಯರೇ "**

ಉತ್ತರ : ಆಯ್ಕೆ : ಈ ವಾಕ್ಯವನ್ನು ಶಿವರಾಮಕಾರಂತರು ಬರೆದಿರುವ ' ಅಬುವಿನಿಂದ ಬರಾಮಕ್ಕೆ ಕೃತಿಯಿಂದ ಆರಿಸಲಾಗಿರುವ ಬೆಡಗಿನ ತಾಣ ಜಯಪುರ ' ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ . ಸಂದರ್ಭ : ಲೇಖಕರು ಜಯಪುರದ ಜನರಿಗಿರುವ ಬಣ್ಣಗಳ ವ್ಯಾಮೋಹವನ್ನು ವರ್ಣಿಸುವ ಸಂದರ್ಭದಲ್ಲಿ ಹೀಗೆ ಹೇಳಿದ್ದಾರೆ . ಜಯಪುರದ ಜನರು ಅದರಲ್ಲೂ ಹೆಂಗಸರೂ ರಂಗುರಂಗಿನ ಲಂಗ , ಪಾಯಿಜಾಮಾ , ಸೀರೆ , ರವಿಕೆ , ಮೇಲುದೆ ತೊಡುವ ಅಭ್ಯಾಸದವರು : ಅದರಲ್ಲೂ ಕೆಂಪು , ಕಿತ್ತಳೆ , ಹಳದಿ ಎಂದರೆ ಪ್ರಾಣ , ಗಂಡಸರೂ ರಂಗುರಾಯರೇ , ಅವರ ಪಂಚೆ , ಅಂಗಿಗಳಲ್ಲಿ ರಂಗು ಕಾಣಿಸದಿದ್ದರೂ ಮುಂಡಾಸಿನ ಮೂವತ್ತು ಮೊಳಗಳಲ್ಲಿ ಮುನ್ನೂರು ಬಣ್ಣಗಳನ್ನು ಮೆರೆಯಿಸುತ್ತಾರೆ . ಎಂದು ಲೇಖಕರು ವರ್ಣಿಸಿದ್ದಾರೆ .

ಸ್ವಾರಸ್ಯ : ಜಯಪುರದಲ್ಲಿ ಬಣ್ಣದ ವ್ಯಾಮೋಹ ಹೊಂದಿರುವುದರಲ್ಲಿ ಹೆಂಗಸರಷ್ಟೇ ಅಲ್ಲ ಗಂಡಸರೂ ಮುಂದಿದ್ದಾರೆ ಎಂಬುದು ಲೇಖಕರ ಮಾತಿನ ಸ್ವಾರಸ್ಯವಾಗಿದೆ .

## ಉ ) ಬಿಟ್ಟ ಜಾಗಗಳನ್ನು ಸೂಕ್ತ ಪದಗಳಿಂದ ತುಂಬಲ ,


| Download: Kannadapdf.com | https://kannadapdf.com/ |
|---|---|


Kannadapdf.com

I ಜಯಪುರ ಬಣ್ಣಗಾರರ ತವರೂರು

2 , ಚಿತ್ರಕೊರೆದು ಮಾಡಿದ ಹಾಲುಗಲ್ಲಿನ ನೀರ ಕಾಲುವೆಗಳು ,

3 , ರಾಜರ ಅಂತಃಪುರದ ಕೆಲವು ಭಾಗಗಳಲ್ಲಿ ಚಂದ್ರಕಾಂತ ಶಿಲೆಯ ಸುಂದರ ಮಂಟಪಗಳಿವೆ .

4. ಹಿಮ್ಮೇಳಕ್ಕೆ ಡೋಲು ತಮಟೆಗಳಿದ್ದವು .

5. ಮಿತ್ರ ರೈಗಳ ಸತ್ಕಾರಕ್ಕೆ ವಂದನೆ ಸಲ್ಲಿಸಿದೆವು

ಸರಿ ಉತ್ತರಗಳು

1 , ತವರೂರು ,

2 , ಹಾಲುಗಲ್ಲಿನ

3 , ಚಂದ್ರಕಾಂತ ಶಿಲೆಯ

4 ,ಡೋಲು

5 , ಸತ್ಕಾರಕ್ಕೆ

## ಊ) ಹೊಂದಿಸಿ ಬರೆಯಿರಿ

| ಅ ಪಟ್ಟಿ | ಆ ಪಟ್ಟಿ | ಸರಿ ಉತ್ತರಗಳು |
|---|---|---|
| 1 , ಅಂಬೇರ | ಸುವರ್ಣ ದೀರ್ಘಸಂಧಿ | ಪೂರ್ವದ ರಾಜಧಾನಿ |
| 2 , ಲಕ್ಷೇಪಲಕ್ಷ | ತತ್ಸಮ | ಗುಣಸಂಧಿ |
| 3. ಬಣ್ಣಬಣ್ಣ | ಪೂರ್ವದ ರಾಜಧಾನಿ | ಖಗೋಳ ವೀಕ್ಷಣಾಲಯ |
| 4 ಜಂತ್ರ ಮಂತ್ರ | ದ್ವಿರುಕ್ತಿ | ತತ್ಸಮ |
| | ಮಂತ್ರವಾದಿ | |

KannadaPdf.com

## ಭಾಷಾ ಚಟುವಟಿಕೆ

### ಅ, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರಿಸಿ ,

**1 ಸಂಸ್ಕೃತ ಸಂಧಿ ಎಂದರೇನು ? ಅದರ ವಿಧಗಳಾವುವು ?**

ಉತ್ತರ : ಸಂಸ್ಕೃತ ಪದಗಳೇ ಸೇರಿ ಸಂಧಿಯಾದರೆ ಅವುಗಳನ್ನು ಸಂಸ್ಕೃತಸಂಧಿ ಎಂದು ಕರೆಯಲಾಗುತ್ತದೆ . ಎರಡು ಸ್ವರಗಳ ನಡುವೆ ಸಂಧಿಯಾದರೆ ಅದು ಸ್ವರಸಂಧಿ , ಸ್ವರಕ್ಕೆ ವ್ಯಂಜನ ಅಥವಾ ವ್ಯಂಜನಕ್ಕೆ ವ್ಯಂಜನ ಸೇರಿ ಸಂಧಿಯಾದರೆ ಅದು ವ್ಯಂಜನಸಂಧಿ .

**2 , ಸವರ್ಣದೀರ್ಘಸಂಧಿ ಎಂದರೇನು ?**

ಉತ್ತರ : ಸವರ್ಣಸ್ವರಗಳು ಒಂದರ ಮುಂದೆ ಒಂದು ಸೇರಿ ಸಂಧಿಯಾದಾಗ ಅವೆರಡರ ಸ್ಥಾನದಲ್ಲಿ ಅದೇ ಜಾತಿಯ ದೀರ್ಘಸ್ವರ ಆದೇಶವಾಗಿ ಬಂದರೆ ಅದನ್ನು ಸವರ್ಣ ದೀರ್ಘಸಂಧಿ ಎಂದು ಕರೆಯುವರು .

**3 , ಗುಣಸಂಧಿ ಎಂದರೇನು ? ಉದಾಹರಣೆ ಕೊಡಿ .**

ಉತ್ತರ : ಅ ಆ ಕಾರಗಳಿಗೆ ಇ ಈ ಕಾರಗಳು ಪರವಾದರೆ ಅವೆರಡರ ಸ್ಥಾನದಲ್ಲಿ ' ಏ ' ಕಾರವೂ ಉ ಊ ಕಾರಗಳು ಪರವಾದರೆ ' ಓ ' ಕಾರವೂ ' ಋ ' ಕಾರ ಪರವಾದರ ' ಅರ್ ' ಕಾರವೂ ಆದೇಶವಾಗಿ ಬಂದರೆ ಅದು ಗುಣಸಂಧಿ ,

**4 ಸಮಾಸ ಎಂದರೇನು ? ಅದರ ವಿಧಗಳಾವುವು ?**

ಉತ್ತರ : ಎರಡು ಅಥವಾ ಅನೇಕ ಪದಗಳು ಅರ್ಥಕ್ಕನುಸಾರವಾಗಿ ಸೇರಿ , ಮಧ್ಯದಲ್ಲಿರುವ ವಿಭಕ್ತಿಪ್ರತ್ಯಯವನ್ನು ಲೋಪ ಮಾಡಿಕೊಂಡು ಒಂದು ಪದವಾಗುವುದಕ್ಕೆ ಸಮಾಸ ಎಂದು ಕರೆಯುವರು . ಇದರಲ್ಲಿ ತತ್ಪುರುಷ , ಕರ್ಮಧಾರಯ , ದ್ವಿಗು , ಅಂಶಿ , ದ್ವಂದ್ವ , ಬಹುವ್ರಿಹಿ , ಕ್ರಿಯಾ , ಗಮಕ ಸಮಾಸ ಎಂಬ ವಿಧಗಳಿವೆ .

**5 ಅಂಶಿ ಸಮಾಸ ಎಂದರೇನು ? ಎರಡು ಉದಾಹರಣೆಗಳನ್ನು ಬರೆಯಿರಿ .**

ಉತ್ತರ : ಪೂರ್ವೋತ್ತರ ಪದಗಳು ಅಂಶಾಂಶಿ ಭಾವ ಸಂಬಂಧದಿಂದ ಸೇರಿ ಸಮಾಸವಾಗುವಾಗ ಪೂರ್ವಪದದ ಅರ್ಥವು ಪ್ರಧಾನವಾಗಿದ್ದರೆ ಅದು ಅಂಶಿಸಮಾಸ

ಉದಾ :

ತಲೆಯ+ಹಿಂದು=ಹಿಂದಲೆ

ಮನೆಯ+ನಡು =ನಡುಮನೆ

ಹುಬ್ಬಿನ+ಕೊನೆ =ಕೊನೆಹುಬ್ಬು

ನಾಲಿಗೆಯ+ತುದಿ=ತುದಿನಾಲಗೆ

**6. ದ್ವಂದ್ವ ಸಮಾಸ ಎಂದರೇನು ? ಎರಡು ಉದಾಹರಣೆಗಳನ್ನು ಬರೆಯಿರಿ .**

ಉತ್ತರ : ಎರಡು ಅಥವಾ ಅನೇಕ ನಾಮಪದಗಳು ಸಹಯೋಗ ತೋರುವಂತೆ ಸೇರಿ ಎಲ್ಲಾ ಪದಗಳ ಅರ್ಥವೂ ಪ್ರಧಾನವಾಗಿ ಇರುವ ಸಮಾಸವೇ ದ್ವಂದ್ವ ಸಮಾಸ ,

ಉದಾ :

ರಾಮನೂ + ಲಕ್ಷ್ಮಣನೂ = ರಾಮಲಕ್ಷ್ಮಣರು


KannadaPdf.com

ಕೆರೆಯೂ + ಕಟ್ಟೆಯೂ + ಬಾವಿಯ = ಕೆಲೆಕಟ್ಟೆಬಾವಿಗಳು ,

ಆನೆಯೂ +ಕುದುರೆಯೂ + ಒಂಟೆಯ = ಆನೆಕುದುರೇಒಂಟೆಗಳು .

ಗಿಡವೂ+ಮರವೂ + ಬಳ್ಳಿಯೂ = ಗಿಡಮರಬಳ್ಳಿಗಳು .

ಹೊಲವೂ + ಮನೆಯ = ಹೊಲಮನಗಳು.

ಮಠವೂ + ಮನೆಯೂ =ಮನೆಮಠಗಳು.

ಗುಡುಗು+ಸಿಡಿಲು+ ಮಿಂಚೂ = ಗುಡುಗುಸಿಡಿಲುಮಿಂಚುಗಳು ,

ಸೂರ್ಯನೂ+ ಚಂದ್ರನೂ+ ನಕ್ಷತ್ರವೂ = ಸೂರ್ಯಚಂದ್ರನಕ್ಷತ್ರಗಳು ,

ಕುರಿಯೂ +ತುರಗವೂ+ ರಥವೂ = . ಕರಿತುರಗರಥಗಳು .

ಗಿರಿಯೂ + ದುರ್ಗ ವೂ + ವನವೂ = ಗಿರಿವನದುರ್ಗಗಳು .

## ಆ , ಕೊಟ್ಟಿರುವ ಪದಗಳಲ್ಲಿ ಅನುಸ್ವಾರ – ವಿಸರ್ಗ ಸಹಿತ ಅಕ್ಷರಗಳನ್ನು ಗುರುತಿಸಿ ಬರೆಯಿರಿ ,

ಸ್ವತಃ ( ತಃ ) ಸುಂದರ ( ಸುಂ ) . ರಂಗುರಂಗಿನ ( ರಂ , ರಂ )

ಕೆಂಪು( ಕೆಂ ) ದುಃಖ ( ದುಃ ) ಹಿಂದೊಮ್ಮೆ ( ಹಿಂ)

ಗಂಡಸರು (ಗಂ) ಅಂತಃಕರಣ( ಅಂ,ತಃ , ) ಪಂಚೆ ( ಪಂ )

ಅಂಗಿ ( ಅಂ) ಮುಂಡಾಸು ( ಮುಂ ) ಆಂಬೇರ ( ಅಂ )

ಸಭಾಂಗಣ ( ಭಾಂ ) ಅಂತಃಪುರ ( ಅಂ , ತಃ )ಪುನಃ (ನಃ)

ಜಂತ್ರಮಂತ್ರ( ಜಂ,ಮಂ) ಅಂತಸ್ತು ಅಂ )

## ಇ , ಕೊಟ್ಟಿರುವ ಪದಗಳಲ್ಲಿ ಅನುನಾಸಿಕ ಅಕ್ಷರಗಳನ್ನು ಗುರುತಿಸಿ ಬರೆಯಿರಿ

ನಗರ ( ನ ) ಮಧ್ಯ (ಮ) ಪರಿಣಾಮ(ಣಾ) ಬಣ್ಣ(ಣ್ಣ)

ನಿತ್ಯ ( ನಿ ) ಜನ ( ನ ) ಮನೆ (ಮ,ನೆ) ಕಣಿವೆ (ಣಿ)

ಮಂದಿರ (ಮ) ವಿಜ್ಞಾನ ( ಜ್ಞಾ)

KannadaPdf.com